ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ 27ನೇ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವರದಿಯನ್ನೊಪ್ಪಿಸಲಾಯಿತು.

(ಆ) **ಶ್ರೀ ಎಂ. ಶ್ರೀನಿವಾಸ್ (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ):** ಮಾನ್ಯ ಅಧ್ಯಕ್ಷರೆ, ಮೆ: ಚಾಮುಂಡೇಶ್ವರಿ ಬಿಲ್ಡ್‌ಟೆಕ್ ಸಂಸ್ಥೆಯವರು ಈಗಲ್‌ಟನ್ ಗಾಲ್ಫ್ ಗ್ರಾಮ ಯೋಜನೆಗಾಗಿ ಸರ್ಕಾರಿ ಜಮೀನನ್ನು ಅನಧಿಕೃತವಾಗಿ ಒತ್ತುವರಿ ಮಾಡಿಕೊಂಡಿರುವ ಬಗ್ಗೆ ವಿಶೇಷ ವರದಿ (ಕಂದಾಯ ಇಲಾಖೆ) ಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು: ವರದಿಯನ್ನೊಪ್ಪಿಸಲಾಯಿತು.

(ಇ). **ಡಾ: ಹೇಮಚಂದ್ರ ಸಾಗರ್ (ಅಧ್ಯಕ್ಷರು, ವಿಶೇಷ ಸದನ ಸಮಿತಿ);** ಮಾನ್ಯ ಅಧ್ಯಕ್ಷರೆ, ದಿನಾಂಕ: 30–12–2009ರಂದು ಮಾನ್ಯ ಸಭಾಧ್ಯಕ್ಷರ ಚುನಾವಣಾ ಸಂದರ್ಭದಲ್ಲಿ ನಡೆದ ಅಹಿತಕರ ಘಟನೆಗೆ ಸಂಬಂಧಿಸಿದಂತೆ ವಿಚಾರಣೆ ನಡೆಸಿ ವರದಿ ಸಲ್ಲಿಸಲು ರಚಿತವಾದ ವಿಶೇಷ ಸದನ ಸಮಿತಿಯ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು: ವರದಿಯನ್ನೊಪ್ಪಿಸಲಾಯಿತು.

(ಗೊಂದಲ)

(ಈ) **ಶ್ರೀ ಎಂ.ಪಿ. ಅಪ್ಪಚ್ಚು (ರಂಜನ್) (ಅಧ್ಯಕ್ಷರು, ಸದನ ಸಮಿತಿ),** ಮಾನ್ಯ ಅಧ್ಯಕ್ಷರೆ, ದಿನಾಂಕ: 11–10–2010ರಂದು ಮಾನ್ಯ ಮುಖ್ಯ ಮಂತ್ರಿಯವರು ಸದನದಲ್ಲಿ ವಿಶ್ವಾಸಮತ ಯಾಚಿಸುವ ಸಂದರ್ಭದಲ್ಲಿ ನಡೆದ ಅಹಿತಕರ ಘಟನೆಗೆ ಸಂಬಂಧಿಸಿದಂತೆ ವಿಚಾರಣೆ ನಡೆಸಿ ವರದಿ ಸಲ್ಲಿಸಲು ರಚಿತವಾದ ಸದನ ಸಮಿತಿಯ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು: ವರದಿಯನ್ನೊಪ್ಪಿಸಲಾಯಿತು.

(ಗೊಂದಲ)

(ಉ) **ಅಧ್ಯಕ್ಷರು: ಶ್ರೀ ಟಿ.ಬಿ ಜಯಚಂದ್ರ (ಅಧ್ಯಕ್ಷರು, ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ)** ಅವರ ಹೆಸರಿನ ಮುಂದಿರುವ ವರದಿಯನ್ನು ಸಭೆಯ ಮುಂದೆ ಮಂಡಿಸಲಾಗಿದೆ.

ಅಧ್ಯಕ್ಷರು: ವರದಿಯನ್ನೊಪ್ಪಿಸಲಾಯಿತು.

(ಗೊಂದಲ)